## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಚಾಲೆಂಜ್ ಫಂಡ್ ಯೋಜನೆಯಡಿ ಸೃಜನಾತ್ಮಕವಾದ ಹಾಗೂ ಪರಿಣಾಮಕಾರಿಯಾದ ಯೋಜನೆಗಳನ್ನು ಸರ್ಕಾರದ ಇಲಾಖೆಗಳು ಹಾಗೂ ಸಂಸ್ಥೆಗಳಲ್ಲಿ ಜಾರಿಗೆ ತರುವ ಸಲುವಾಗಿ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೆಂಗಳೂರು, ಇವರಿಗೆ ಕ್ರೀಡಾಪಟುಗಳ ಸಾಧನೆ ಟ್ರ್ಯಾಕಿಂಗ್ ವ್ಯವಸ್ಥೆ ಅಳವಡಿಕೆಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:**

1) ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 92 ಇಆಸು 2009, ದಿನಾಂಕ:08.07.2010.
2) ನಿರ್ದೇಶಕರು ಮತ್ತು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಇವರ ಪತ್ರ ಸಂಖ್ಯೆ: ತಕ್ರೀಪ್ರಾ/ಸಿ3-71/2015-16, ದಿನಾಂಕ:17.10.2017.
3) ಸರ್ಕಾರದ ಅಧೀನ ಕಾರ್ಯದರ್ಶಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಇವರ ಅ.ಟಿ.ಸಂಖ್ಯೆ:ಯುಸೇಇ 94 ಸಮನ 2017, ದಿನಾಂಕ:02.11.2017.
3) ದಿನಾಂಕ:22.03.2018 ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಚಾಲೆಂಜ್ ಫಂಡ್ ಯೋಜನೆಯ ಬಗ್ಗೆ ನಡೆದ ಸಭಾ ನಡವಳಿಗಳು.

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ದಿನಾಂಕ: 08.07.2010ರ ಸರ್ಕಾರದ ಆದೇಶದಲ್ಲಿ ಸೃಜನಾತ್ಮಕವಾದ ಹಾಗೂ ಪರಿಣಾಮಕಾರಿಯಾದ ಯೋಜನೆಗಳನ್ನು ಸರ್ಕಾರದ ಇಲಾಖೆಗಳು ಹಾಗೂ ಸಂಸ್ಥೆಗಳಲ್ಲಿ ಜಾರಿಗೆ ತರುವ ಸಲುವಾಗಿ ಚಾಲೆಂಜ್ ಫಂಡ್ ಯೋಜನೆಯನ್ನು ಸ್ಥಾಪಿಸಲಾಗಿದೆ. ಈ ಯೋಜನೆಯಲ್ಲಿ ಗುಣಮಟ್ಟದ ಗುರಿಗಳನ್ನು ಸಾಧಿಸಲು ಪ್ರಯೋಗಾತ್ಮಕ ಯೋಜನೆಗಳನ್ನು ಅನುಷ್ಠಾನಗೊಳಿಸುವ ಸಲುವಾಗಿ ಅನುದಾನವನ್ನು ಬಿಡುಗಡೆ ಮಾಡಲು ಉದ್ದೇಶಿಸಲಾಗಿದೆ. ಈ ಯೋಜನೆಗೆ ಸರ್ಕಾರವು 2017-18ನೇ ಸಾಲಿನಲ್ಲಿ ರೂ.600.00 ಲಕ್ಷಗಳನ್ನು ಮೀಸಲಿರಿಸಿದೆ.

ಓದಲಾದ (2)ರ ದಿನಾಂಕ: 17.10.2017ರ ಪ್ರಸ್ತಾವನೆಯಲ್ಲಿ, ನಿರ್ದೇಶಕರು ಮತ್ತು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಇವರು, ಕ್ರೀಡಾಪಟುಗಳ ಸಾಧನೆ ಟ್ರ್ಯಾಕಿಂಗ್ ವ್ಯವಸ್ಥೆ ಅಳವಡಿಸಲು ಅನುದಾನ ಕೋರಿ, ಇದರಿಂದ ಮಾನ್ಯತೆ ಪಡೆದ ಕ್ರೀಡಾ ಸಂಸ್ಥೆಗಳು ಆಯೋಜಿಸುವ ಕ್ರೀಡಾಕೂಟಗಳಲ್ಲಿ ಕ್ರೀಡಾಪಟುಗಳ ಸಾಧನೆಯ ದಾಖಲೆ, ಕ್ರೀಡಾ ಸಂಸ್ಥೆಗಳಿಗೆ ನೀಡಲಾಗುವ ಅನುದಾನ ವ್ಯವಸ್ಥೆಯ ಪಾರದರ್ಶಕಗೊಳಿಸಲು ನೆರವಾಗುವುದು. ಪ್ರತಿಭಾವಂತ ಕ್ರೀಡಾಪಟುಗಳನ್ನು ಗ್ರಾಮೀಣ, ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ, ಪ್ರಾರಂಭಿಕ ಹಂತದಲ್ಲಿಯೇ ಗುರುತಿಸಿ, ಅವರ ತರಬೇತಿಗೆ ಅಗತ್ಯ ಸೌಲಭ್ಯ ಕಲ್ಪಿಸಲು ಹಾಗೂ ಉತ್ತಮ ಕ್ರೀಡಾಪಟುಗಳನ್ನು ಗುರುತಿಸಿ ಪ್ರೋತ್ಸಾಹ ನೀಡಲು ಅನುಕೂಲವಾಗುವುದೆಂದು ವಿವರಿಸಿ ಇದರಿಂದ ಕ್ರೀಡಾಪಟುಗಳಿಗಾಗಿ ಇರುವ ವಿವಿಧ ಸರ್ಕಾರಿ ಸೌಲಭ್ಯಗಳ ದುರ್ಬಳಕೆಯನ್ನು ತಡೆಯಲು ಸಹಕಾರಿಯಾಗುವುದೆಂದು ತಿಳಿಸಿ ರೂ.25.00 ಲಕ್ಷ ಅನುದಾನವನ್ನು ಮಂಜೂರು ಮಾಡಲು ಕೋರಿರುತ್ತಾರೆ.

ಓದಲಾದ (3)ರಲ್ಲಿ, ಸರ್ಕಾರದ ಅಧೀನ ಕಾರ್ಯದರ್ಶಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಇವರು, ನಿರ್ದೇಶಕರು ಮತ್ತು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಇವರ ಕ್ರೀಡಾಪಟುಗಳ ಸಾಧನೆ ಟ್ರ್ಯಾಕಿಂಗ್ ವ್ಯವಸ್ಥೆ ಅಳವಡಿಸುವ ಯೋಜನೆಯ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಓದಲಾದ (4)ರಲ್ಲಿ, ಚಾಲೆಂಜ್ ಫಂಡ್ ಯೋಜನೆ ಜಾರಿಗೆ ಸಂಬಂಧಪಟ್ಟಂತೆ ಅನುದಾನ ಬಿಡುಗಡೆ ಮಾಡಲು ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ದಿನಾಂಕ: 22.03.2018ರಂದು ನಡೆದ ಸಭೆಯಲ್ಲಿ, ಪ್ರಸ್ತಾವನೆಯ ಬಗ್ಗೆ ಪರಿಶೀಲಿಸಿ ಚರ್ಚಿಸಲಾಯ್ತು ಹೆಚ್ಚುವರಿ ಮಾಹಿತಿ ಪಡೆದು ಕ್ರೀಡೆಯನ್ನು ಪ್ರೋತ್ಸಾಹಿಸುವ ಸಲುವಾಗಿ, ಕ್ರೀಡಾ ಕ್ಲಬ್ ಮತ್ತು ಅಸೋಸಿಯೇಷನ್‌ಗಳ ನೆರವಿಲ್ಲದೆ ಸ್ವತಂತ್ರವಾಗಿ, ಪಾರದರ್ಶಕತೆಯಿಂದ, ವಸ್ತುನಿಷ್ಠವಾಗಿ, ಟ್ರ್ಯಾಕಿಂಗ್ ವ್ಯವಸ್ಥೆಯನ್ನು ಸಮರ್ಪಕವಾಗಿ ಅಳವಡಿಸಿ ಕಾರ್ಯಗತಗೊಳಿಸಲು ರೂ.25.00 ಲಕ್ಷ ಅನುದಾನವನ್ನು ಮಂಜೂರು ಮಾಡಲು ಸಭೆಯಲ್ಲಿ ಒಪ್ಪಲಾಯಿತು.

ಅದರಂತೆ, ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ:120:ಇಆಸು:2017**
**ಬೆಂಗಳೂರು, ದಿನಾಂಕ: 26.03.2018.**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಸರ್ಕಾರದ ಚಾಲೆಂಜ್ ಫಂಡ್ ಯೋಜನೆಯಡಿ ಸೃಜನಾತ್ಮಕವಾದ ಹಾಗೂ ಪರಿಣಾಮಕಾರಿಯಾದ ಯೋಜನೆಗಳನ್ನು ಸರ್ಕಾರದ ಇಲಾಖೆಗಳು ಹಾಗೂ ಸಂಸ್ಥೆಗಳಲ್ಲಿ ಜಾರಿಗೆ ತರುವ ಸಲುವಾಗಿ, ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೆಂಗಳೂರು, ಇವರಿಗೆ, ಕ್ರೀಡಾಪಟುಗಳ ಟ್ರ್ಯಾಕಿಂಗ್ ವ್ಯವಸ್ಥೆ ಅಳವಡಿಸಲು ರೂ.25,00,000/-ಗಳ (ಇಪ್ಪತ್ತೈದು ಲಕ್ಷ ರೂಪಾಯಿಗಳು ಮಾತ್ರ) ಅನುದಾನವನ್ನು ಬಿಡುಗಡೆ ಮಾಡಲು ಮಂಜೂರಾತಿ ನೀಡಿದೆ.

ಯೋಜನೆ ನಿರ್ವಹಿಸುವ ಅಧಿಕಾರಿಯು ನಿಗದಿತ ಅವಧಿಯಲ್ಲಿ ಯೋಜನೆಯನ್ನು ಸಮರ್ಪಕವಾಗಿ ನಿರ್ವಹಿಸಿ ಅನುದಾನ ಬಳಕೆಯ ಪ್ರಮಾಣ ಪತ್ರವನ್ನು ಸಕಾಲದಲ್ಲಿ ತಪ್ಪದೇ ಒದಗಿಸುವುದು. ತಪ್ಪಿದಲ್ಲಿ, ಬಿಡುಗಡೆಯಾದ ಅನುದಾನವನ್ನು ಸರ್ಕಾರಕ್ಕೆ ಹಿಂದಿರುಗಿಸತಕ್ಕದ್ದು.

ಈ ವೆಚ್ಚವನ್ನು ಲೆಕ್ಕ ಶೀರ್ಷಿಕೆ 2052-00-090-0-25-059 (ಯೋಜನೇತರ) ಆಡಳಿತ ಸುಧಾರಣೆ ಸವಾಲು ನಿಧಿ- ಅಡಿಯಲ್ಲಿ ಭರಿಸತಕ್ಕದ್ದು.

ಈ ಯೋಜನೆಯನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ (ಕೆ.ಟಿ.ಪಿ.ಪಿ)ರನ್ವಯ ಕಾರ್ಯ ನಿರ್ವಹಿಸುವಂತೆ ಆದೇಶಿಸಿದೆ. ಯೋಜನೆ ಪೂರೈಸಿದ ನಂತರ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯಿಂದ ಮೌಲ್ಯಮಾಪನ ಮಾಡಿಸತಕ್ಕದ್ದು.

ಈ ಆದೇಶವನ್ನು, ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 01 ಟಿಎಫ್‌ಪಿ 2017, ದಿನಾಂಕ: 05.04.2017 ಮತ್ತು ಆಇ 05 ಟಿಎಫ್‌ಪಿ 2017, ದಿನಾಂಕ: 01.01.2018ರಲ್ಲಿ ಆಡಳಿತ ಇಲಾಖಾ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿರುವ ಅಧಿಕಾರದನ್ವಯ ಹೊರಡಿಸಿದೆ

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ.

(ಸುಜಾತ ಹೆಚ್.ಎಸ್ )
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ-ತರಬೇತಿ)

ಪ್ರತಿ:

1. ಮಹಾಲೇಖಪಾಲರು ಕರ್ನಾಟಕ, (ಆಡಿಟ್ 1 ಮತ್ತು 2) (ಲೆಕ್ಕಪತ್ರ 1 ಮತ್ತು 2), ಬೆಂಗಳೂರು
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೆಂಗಳೂರು.
5. ನಿರ್ದೇಶಕರು, ಕರ್ನಾಟಕ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆ, ಶಾಂತಿನಗರ, ಬೆಂಗಳೂರು-560027.
5. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ., ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿಆಸುಇ (ಆಸು) ರವರ ಆಪ್ತ ಕಾರ್ಯದರ್ಶಿ.
7. ಸರ್ಕಾರದ ಉಪ ಕಾರ್ಯದರ್ಶಿ, ಸಿಆಸುಇ (ಆಸು) ರವರ ಆಪ್ತ ಸಹಾಯಕರು.
8. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.